ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ರಾಜರಾಜೇಶ್ವರಿನಗರ ವಲಯ
18ನೇ ಕ್ರಾಸ್, ಐಡಿಯಲ್ ಹೋಮ್ಸ್, ರಾಜರಾಜೇಶ್ವರಿನಗರ, ಬೆಂಗಳೂರು- 98

ಸಂಖ್ಯೆ:ಮು.ಅ/ರಾ.ರಾ.ನ.ವ/ಪಿಆರ್/೦೩೧/2022-23 ದಿನಾಂಕ: 26-04-2022

ಪರಿವೀಕ್ಷಣಾ ವರದಿ

ವಿಷಯ:- **Construction of Toilets inside J.P Park in ward no.17"** ಕಾಮಗಾರಿಯ ಪರಿವೀಕ್ಷಣಾ ವರದಿ ನೀಡುವ ಬಗ್ಗೆ.

* * * * *

ಹಾಜರಿದ್ದ ಅಧಿಕಾರಿಗಳು:

1. ಕಾರ್ಯಪಾಲಕ ಅಭಿಯಂತರರು ರಾ.ರಾ.ನಗರ ವಿಭಾಗ
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಶವಂತಪುರ ಉಪವಿಭಾಗ
3. ಸಹಾಯಕ ಅಭಿಯಂತರರು, ವಾರ್ಡ್ ನಂ.17

ರಾಜರಾಜೇಶ್ವರಿ ನಗರ ವಲಯ ವ್ಯಾಪ್ತಿಯ ವಾರ್ಡ್ ನಂ.17 ಜೆ.ಪಿ ಪಾರ್ಕ್ ವಾರ್ಡ್ ವ್ಯಾಪ್ತಿಯಲ್ಲಿ 2019-20ನೇ ಸಾಲಿನ ಲೆಕ್ಕಶೀರ್ಷಿಕೆ ಪಿ-3294 ಅನುದಾನದಡಿಯಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಯಾದ **"Construction of Toilets inside J.P Park in ward no.17"** (017-20-000017) ರಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ರೂ.50.00 ಲಕ್ಷಗಳಿಗೆ 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆಯ ದರಪಟ್ಟಿಯ ದರದಂತೆ ಅಂದಾಜು ಪಟ್ಟಿ ಮಂಜೂರಾಗಿದ್ದು, ಅದರಂತೆ ಟೆಂಡರ್ ಕರೆದು ಸದರಿ ಕಾಮಗಾರಿಯ ಕಾರ್ಯಾದೇಶ ಸಂಖ್ಯೆ:EE/RRND/Wo.No./000116/2020-21, Dt.10.12.2020 ರಂದು ಗುತ್ತಿಗೆದಾರರಾದ ಶ್ರೀ.ರಂಗಶಾಮಯ್ಯ ರವರಿಗೆ ಕಾರ್ಯಾದೇಶವನ್ನು ನೀಡಲಾಗಿರುತ್ತದೆ.

ಮುಂದುವರೆದು, ಕಾಮಗಾರಿಯ ಮೂಲ ಅಂದಾಜುಪಟ್ಟಿಯಲ್ಲಿ ಜೆ.ಪಿ ಉದ್ಯಾನವನದಲ್ಲಿನ ನಾಲ್ಕು ಶೌಚಾಲಯಗಳ ನಿರ್ಮಾಣಕ್ಕೆ ಅವಶ್ಯವಿದ್ದ ಅಂಶಗಳನ್ನು ಅಳವಡಿಸಿಕೊಂಡು ಅಂದಾಜುಪಟ್ಟಿಯನ್ನು ತಯಾರಿಸಲಾಗಿರುತ್ತದೆ. ಆದರೆ ಕಾಮಗಾರಿ ಪ್ರಾರಂಭದ ಸಮಯದಲ್ಲಿ ನಾಲ್ಕು ಶೌಚಾಲಯ ನಿರ್ಮಾಣಕ್ಕೆ ಸ್ಥಳಾವಕಾಶ ಕೊರತೆ ಎದುರಾಗಿರುತ್ತದೆ. ಈ ಸಂದರ್ಭದಲ್ಲಿ ಮಾನ್ಯ ತೋಟಗಾರಿಕೆ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಶಾಸಕರು, ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ರವರು ಜೆ.ಪಿ ಉದ್ಯಾನವನದಲ್ಲಿ ನಡೆಯುತ್ತಿರುವ ಇತರೆ ಕಾಮಗಾರಿಗಳ ಪರಿಶೀಲನೆಗೆ ಆಗಮಿಸಿದ್ದ ಸಂದರ್ಭದಲ್ಲಿ ಶೌಚಾಲಯ ನಿರ್ಮಾಣಕ್ಕೆ ಸ್ಥಳಾವಕಾಶ ಕೊರತೆಯ ಬಗ್ಗೆ ಮಾನ್ಯ ಸಚಿವರ ಗಮನಕ್ಕೆ ತರಲಾಗಿ ಜೆ.ಪಿ ಉದ್ಯಾನವನದಲ್ಲಿ ಹಾಲಿ ಇರುವ ಶೌಚಾಲಯಗಳ ಪೈಕಿ ಸಂಪೂರ್ಣ ಶಿಥಿಲಾವಸ್ಥೆಯಲ್ಲಿರುವ ಒಂದು ಶೌಚಾಲಯವನ್ನು ಕೆಡವಿ ಹೊಸದಾಗಿ ನಿರ್ಮಿಸಲು ಹಾಗೂ ಇನ್ನುಳಿದ ಶೌಚಾಲಯಗಳ ದುರಸ್ಥಿ/ಉನ್ನತೀಕರಣಗೊಳಿಸಲು ಅಗತ್ಯ ಕ್ರಮವಹಿಸಲು ಸೂಚಿಸಿರುತ್ತಾರೆ.

ಮುಂದುವರೆದಂತೆ, ಮಾನ್ಯ ತೋಟಗಾರಿಕೆ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಶಾಸಕರು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ರವರ ನಿರ್ದೇಶನದಂತೆ ವಾರ್ಡ್‌ನ ಸಹಾಯಕ ಅಭಿಯಂತರರೊಡನೆ ಮು.ಅ(ರಾ.ರಾ.ನಗರ) ಮತ್ತು ಕಾ.ಪಾ.ಅ(ರಾ.ರಾ.ನಗರ)/ಸ.ಕಾ.ಅ(ಯಶವಂತಪುರ) ರವರು ಕಾಮಗಾರಿ ಸ್ಥಳವನ್ನು ಪರಿಶೀಲಿಸಿ, ಸದರಿ ಕಾಮಗಾರಿಗೆ ಅನುಗುಣವಾಗಿ ಅಗತ್ಯವಿರುವ ಎಲ್ಲಾ ಅಂಶಗಳನ್ನು ಅಳವಡಿಸಿಕೊಂಡು ಹಾಗೂ ಟೆಂಡರ್ ನಿಯಮಾವಳಿ Clause 35 ರಂತೆ ದರಗಳನ್ನು ನಿಗಧಿಪಡಿಸಿ, ಈಗಾಗಲೇ ಅನಮೋದನೆಯಾಗಿರುವ

ಪು.ತಿ.ನೋ...

Scanned with CamScanner

ಅಂದಾಜುಪಟ್ಟಿಯನ್ನು ಮಾರ್ಪಾಡು ಮಾಡಿಕೊಂಡು ಕಲ್ವರ್ಟ್‌ಗಳನ್ನು ದುರಸ್ಥಿಪಡಿಸಲು ಬೇಕಾಗಿರುವ ಅಂಶಗಳನ್ನು ಸ್ಥಳದಲ್ಲಿನ ಅವಶ್ಯಕತೆ ಹಾಗೂ ಸಾರ್ವಜನಿಕರ ಉಪಯೋಗಕ್ಕಾಗಿ ಅನುಕೂಲವಾಗುವಂತೆ ಅವಶ್ಯವಿರುವ ಅಂಶಗಳನ್ನು ಅಳವಡಿಸಿಕೊಂಡು ಕೆಲವು ಮಾರ್ಪಾಡುಗಳೊಂದಿಗೆ ಮಾರ್ಪಾಡು ಅಂದಾಜು ಪಟ್ಟಿಯನ್ನು ಅನುಮೋದಿತ ಟೆಂಡರ್ ಮೊತ್ತದೊಳಗೆ ತಯಾರಿಸಿ ಅನುಮೋದನೆ ಪಡೆದುಕೊಳ್ಳಲು ಕಾರ್ಯಪಾಲಕ ಅಭಿಯಂತರರು (ರಾ.ರಾ.ನಗರ) ರವರಿಗೆ ಪರಿವೀಕ್ಷಣೆ ಸಮಯದಲ್ಲಿ ಸೂಚಿಸಲಾಯಿತು.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿನಗರ ವಲಯ

ರವರಿಗೆ,
ಕಾರ್ಯಪಾಲಕ ಅಭಿಯಂತರರು
ರಾ.ರಾ.ನಗರ ವಿಭಾಗ

Scanned with CamScanner